**All India Radio: Bangalore**
**National Bulletin In Kannada**
**04.10.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**04.10.2026  07.35 a.m.**

**<><><><>**

ಮುಖ್ಯಾಂಶಗಳು

1. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಂದ ವಿವಿಧ ಸಚಿವಾಲಯಗಳಿಗೆ ಸಂಬಂಧಿಸಿದ ಹಲವು ಸಂಸದೀಯ ಸಮಿತಿಗಳ ಪುನರ್ ರಚನೆ
2. ಶಾಸ್ತ್ರೀಯ ಭಾಷೆಗಳ ಅಧ್ಯಯನಕ್ಕಾಗಿ ಐದು ಉತ್ಕೃಷ್ಟತಾ ಕೇಂದ್ರಗಳ ಸ್ಥಾಪನೆಗೆ ಕೇಂದ್ರ ಶಿಕ್ಷಣ ಸಚಿವಾಲಯ ಅನುಮೋದನೆ
3. ಪಿಎಂ ಸೇತು ಯೋಜನೆಗೆ ಇಂದಿಗೆ ಒಂದು ವರ್ಷ; ಉದ್ಯೋಗ ಮಾರುಕಟ್ಟೆಗೆ ಅನುಗುಣವಾಗಿ ಬೇಡಿಕೆ ಆಧಾರಿತ ಕೋರ್ಸ್ ಗಳ ಉತ್ತೇಜನ
4. ೨೦ನೇ ಏಷ್ಯನ್ ಕ್ರೀಡಾಕೂಟಕ್ಕೆ ಇಂದು ವರ್ಣರಂಜಿತ ತೆರೆ: ೨೧ ಚಿನ್ನ ಸೇರಿ ೮೫ ಪದಕ ಗೆದ್ದ ಭಾರತಕ್ಕೆ ಪದಕ ಪಟ್ಟಿಯಲ್ಲಿ ನಾಲ್ಕನೇ ಸ್ಥಾನ
5. ಭಾರತ- ವೆಸ್ಟ್ ಇಂಡೀಸ್ ೩ನೇ ಏಕದಿನ ಕ್ರಿಕೆಟ್ ಪಂದ್ಯ: ವೆಸ್ಟ್ ಇಂಡೀಸ್‌ಗೆ ೫ ವಿಕೆಟ್ ಜಯ, ಮೂರು ಪಂದ್ಯಗಳ ಸರಣಿ ಭಾರತದ ಮಡಿಲಿಗೆ

<><><><>

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ವಿವಿಧ ಸಚಿವಾಲಯಗಳಿಗೆ ಸಂಬಂಧಿಸಿದ ಹಲವಾರು ಸಂಸದೀಯ ಸಮಿತಿಗಳನ್ನು ಪುನರ್ ರಚಿಸಿದ್ದಾರೆ. ಲೋಕಸಭೆಯ ೨೧ ಸದಸ್ಯರು ಮತ್ತು ರಾಜ್ಯಸಭೆಯ ೧೦ ಸದಸ್ಯರನ್ನು ಒಳಗೊಂಡ ಹಣಕಾಸು ಸಮಿತಿಯ ಅಧ್ಯಕ್ಷರಾಗಿ ಬಿಜೆಪಿ ಸಂಸದ ಭರ್ತೃಹರಿ ಮಹತಾಬ್ ಅವರನ್ನು ನೇಮಿಸಲಾಗಿದೆ. ಬಿರ್ಲಾ ಅವರು ಕಾಂಗ್ರೆಸ್ ಸಂಸದ ಶಶಿ ತರೂರ್ ಅವರನ್ನು ವಿದೇಶಾಂಗ ವ್ಯವಹಾರಗಳ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಿದ್ದಾರೆ. ಇದರಲ್ಲಿ ಕೆಳಮನೆಯಿಂದ ೨೧ ಸದಸ್ಯರು ಮತ್ತು ಮೇಲ್ಮನೆಯಿಂದ ೧೦ ಸದಸ್ಯರು ಇದ್ದಾರೆ. ರೈಲ್ವೆ ಸಮಿತಿಯ ನೇತೃತ್ವವನ್ನು ಬಿಜೆಪಿ ಸಂಸದ ಸುಧೀರ್ ಗುಪ್ತಾ ವಹಿಸಲಿದ್ದಾರೆ. ರಾಸಾಯನಿಕ ಮತ್ತು ರಸಗೊಬ್ಬರಗಳ ಸಮಿತಿಯ ಅಧ್ಯಕ್ಷರಾಗಿ ಬಿರ್ಲಾ ಅವರು ಲೋಕಸಭಾ ಸಂಸದ

ಡಾ.ಕಾಕೋಲಿ ಘೋಷ್ ದಸ್ತಿದಾರ್ ಅವರನ್ನು ನೇಮಿಸಿದ್ದಾರೆ. ಕಾಂಗ್ರೆಸ್ ಸಂಸದ ಚರಣ್ಜಿತ್ ಸಿಂಗ್ ಚನ್ನಿ ಕೃಷಿ, ಪಶುಸಂಗೋಪನೆ ಮತ್ತು ಆಹಾರ ಸಂಸ್ಕರಣೆ ಸಮಿತಿಯ ಅಧ್ಯಕ್ಷರಾಗಿ ನೇಮಕಗೊಂಡರೆ, ಬಿಜೆಪಿ ಸಂಸದ ರಾಧಾ ಮೋಹನ್ ಸಿಂಗ್ ಅವರನ್ನು ರಕ್ಷಣಾ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ. ಬಿಜೆಪಿ ಸಂಸದ ರಾಜೀವ್ ಪ್ರತಾಪ್ ರೂಡಿ ಅವರನ್ನು ಜಲಸಂಪನ್ಮೂಲ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಲಾಗಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಮಿತಿಯ ನೇತೃತ್ವವನ್ನು ಕಾಂಗ್ರೆಸ್ ಸಂಸದ ಸಪ್ತಗಿರಿ ಉಲಾಕಾ ವಹಿಸಲಿದ್ದಾರೆ. ಸಂವಹನ ಮತ್ತು ಮಾಹಿತಿ ತಂತ್ರಜ್ಞಾನ ಸಮಿತಿಯ ಅಧ್ಯಕ್ಷರಾಗಿ ಬಿಜೆಪಿ ಸಂಸದ ನಿಶಿಕಾಂತ್ ದುಬೆ ಅವರನ್ನು ನೇಮಿಸಲಾಗಿದೆ. ಈ ಸಮಿತಿಗಳ ಅವಧಿ ಕಳೆದ ತಿಂಗಳ ೨೬ ರಿಂದ ಜಾರಿಗೆ ಬರಲಿದೆ.

<><><><>

ಶಾಸ್ತ್ರೀಯ ಭಾಷೆಗಳ ಅಧ್ಯಯನಕ್ಕಾಗಿ ಐದು ಉತ್ಕೃಷ್ಟತಾ ಕೇಂದ್ರಗಳ ಸ್ಥಾಪನೆಗೆ ಕೇಂದ್ರ ಶಿಕ್ಷಣ ಸಚಿವಾಲಯ ಅನುಮೋದನೆ ನೀಡಿದೆ. ಶಾಸ್ತ್ರೀಯ ಅಸ್ಸಾಮಿ, ಶಾಸ್ತ್ರೀಯ ಬಂಗಾಳಿ, ಶಾಸ್ತ್ರೀಯ ಮರಾಠಿ, ಶಾಸ್ತ್ರೀಯ ಪಾಲಿ ಮತ್ತು ಶಾಸ್ತ್ರೀಯ ಪ್ರಾಕೃತ ಅಧ್ಯಯನಕ್ಕಾಗಿ ಐದು ಉತ್ಕೃಷ್ಟತಾ ಕೇಂದ್ರಗಳನ್ನು ಸ್ಥಾಪಿಸಲು ಉನ್ನತ ಶಿಕ್ಷಣ ಇಲಾಖೆ ಒಪ್ಪಿಗೆ ಸೂಚಿಸಿದೆ. ಈ ಉಪಕ್ರಮವು ಸುಧಾರಿತ ಶೈಕ್ಷಣಿಕ ಸಂಶೋಧನೆ, ಭಾಷಾ ಮತ್ತು ಸಾಹಿತ್ಯಿಕ ಪರಂಪರೆಯ ಸಂರಕ್ಷಣೆ ಮತ್ತು ಡಿಜಿಟಲೀಕರಣ ಮತ್ತು ಈ ಶಾಸ್ತ್ರೀಯ ಭಾಷೆಗಳಿಗೆ ಸಂಬಂಧಿಸಿದ ಜ್ಞಾನದ ವ್ಯಾಪಕ ಪ್ರಸರಣಕ್ಕೆ ಮೀಸಲಾದ ಸಾಂಸ್ಥಿಕ ಬೆಂಬಲವನ್ನು ಒದಗಿಸುತ್ತದೆ. ಉತ್ಕೃಷ್ಟತಾ ಕೇಂದ್ರಗಳನ್ನು ಅಸ್ಸಾಂನ ತೇಜ್ ಪುರ ವಿಶ್ವವಿದ್ಯಾಲಯ, ಪಶ್ಚಿಮ ಬಂಗಾಳದ ವಿಶ್ವ-ಭಾರತಿ ವಿಶ್ವವಿದ್ಯಾಲಯ, ಪುಣೆಯ ಡೆಕ್ಕನ್ ಕಾಲೇಜು ಸ್ನಾತಕೋತ್ತರ ಮತ್ತು ಸಂಶೋಧನಾ ಸಂಸ್ಥೆ, ಒಡಿಶಾದ ಕೇಂದ್ರೀಯ ವಿಶ್ವವಿದ್ಯಾಲಯ ಮತ್ತು ಗುಜರಾತ್ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಲಾಗುವುದು. ಈ ಉಪಕ್ರಮವು ಸುಧಾರಿತ ಶೈಕ್ಷಣಿಕ ಸಂಶೋಧನೆ, ಭಾಷಾ ಮತ್ತು ಸಾಹಿತ್ಯಿಕ ಪರಂಪರೆಯ ಸಂರಕ್ಷಣೆ ಮತ್ತು ಡಿಜಿಟಲೀಕರಣ ಮತ್ತು ಈ ಶಾಸ್ತ್ರೀಯ ಭಾಷೆಗಳಿಗೆ ಸಂಬಂಧಿಸಿದ ಜ್ಞಾನದ ವ್ಯಾಪಕ ಪ್ರಸರಣಕ್ಕೆ ಮೀಸಲಾದ ಸಾಂಸ್ಥಿಕ ಬೆಂಬಲವನ್ನು ಒದಗಿಸುತ್ತದೆ. ಈ ಐದು ಕೇಂದ್ರಗಳ

ಸ್ಥಾಪನೆಯು ಭಾರತದ ಶಾಸ್ತ್ರೀಯ ಭಾಷೆಗಳ ಅಧ್ಯಯನ, ಸಂಶೋಧನೆ ಮತ್ತು ಸಂರಕ್ಷಣೆಗಾಗಿ ಸಾಂಸ್ಥಿಕ ಪರಿಸರ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ.

<><><><>

ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯದ ಪ್ರಧಾನಮಂತ್ರಿ ಕೌಶಲ್ಯ ಮತ್ತು ಉದ್ಯೋಗಾರ್ಹತೆ ಪರಿವರ್ತನೆ ಯೋಜನೆ-ಪಿಎಂ ಸೇತುಗೆ ಇಂದು ಒಂದು ವರ್ಷ ಪೂರ್ಣಗೊಂಡಿದೆ. ಕಳೆದ ವರ್ಷ ಅಕ್ಟೋಬರ್ ೪ರಂದು ಈ ಯೋಜನೆಯನ್ನು ಆರಂಭಿಸಲಾಗಿತ್ತು. ಕೈಗಾರಿಕೆ ಆಧಾರಿತ ಆಡಳಿತವನ್ನು ಬಲಪಡಿಸುವುದು, ತರಬೇತಿ ಮೂಲಸೌಕರ್ಯವನ್ನು ಉನ್ನತೀಕರಿಸುವುದು ಹಾಗೂ ಬದಲಾಗುತ್ತಿರುವ ಉದ್ಯೋಗ ಮಾರುಕಟ್ಟೆಯ ಅಗತ್ಯಗಳಿಗೆ ಅನುಗುಣವಾಗಿ ಬೇಡಿಕೆ ಆಧಾರಿತ ಕೋರ್ಸ್‌ಗಳನ್ನು ಉತ್ತೇಜಿಸುವುದು ಯೋಜನೆಯ ಉದ್ದೇಶವಾಗಿದೆ. ದೇಶದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಆಧುನಿಕ ಮತ್ತು ಕೈಗಾರಿಕಾ ಅಗತ್ಯಗಳಿಗೆ ಹೊಂದಿಕೊಳ್ಳುವ ತರಬೇತಿ ಸಂಸ್ಥೆಗಳಾಗಿ ಪರಿವರ್ತಿಸುವ ಮೂಲಕ ವೃತ್ತಿಪರ ತರಬೇತಿಯ ಗುಣಮಟ್ಟ ಮತ್ತು ಪ್ರಸ್ತುತತೆಯನ್ನು ಹೆಚ್ಚಿಸುವ ಗುರಿಯನ್ನು ಪಿಎಂ-ಸೇತು ಹೊಂದಿದೆ. ಈ ಯೋಜನೆಗೆ ಒಟ್ಟು ೬೦ ಸಾವಿರ ಕೋಟಿ ರೂಪಾಯಿಗೂ ಹೆಚ್ಚಿನ ಅನುದಾನ ನಿಗದಿಪಡಿಸಲಾಗಿದ್ದು, ಕೇಂದ್ರ ಸರ್ಕಾರ ೩೦ ಸಾವಿರ ಕೋಟಿ, ರಾಜ್ಯಗಳು ೨೦ ಸಾವಿರ ಕೋಟಿ ಹಾಗೂ ಕೈಗಾರಿಕೆಗಳು ೧೦ ಸಾವಿರ ಕೋಟಿ ರೂಪಾಯಿ ನೀಡಲಿವೆ. ಯುವಜನರಿಗೆ ಉದ್ಯೋಗ ಮತ್ತು ಕೈಗಾರಿಕಾ ಕ್ಷೇತ್ರಕ್ಕೆ ಅಗತ್ಯವಾದ ಪ್ರಾಯೋಗಿಕ ಕೌಶಲ್ಯಗಳನ್ನು ಒದಗಿಸುವಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಪ್ರಮುಖ ಪಾತ್ರ ವಹಿಸುತ್ತಿವೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ದೇಶಾದ್ಯಂತ, ಜನ ಸೇವೆಯೇ ದೇಶ ಸೇವೆ ಎಂಬ ಅಭಿಯಾನ ನಡೆಯುತ್ತಿದೆ. ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಈಶಾನ್ಯ ರಾಜ್ಯಗಳ ಪ್ರಗತಿ ಕುರಿತ ಒಂದು ವರದಿ ಇಲ್ಲಿದೆ. ದೇಶದ ಈಶಾನ್ಯ ಭಾಗದ ಅಭಿವೃದ್ಧಿಗೆ ಭೌಗೋಳಿಕ ಅಂತರವೇ ಅಡ್ಡಿಯಾಗಿರಲಿಲ್ಲ. ಹಲವು ದಶಕಗಳ ಕಾಲ ದೂರದ ನೆಪವೊಡ್ಡಿ ಈ

ಪ್ರದೇಶವನ್ನು ಅಭಿವೃದ್ಧಿಯಿಂದ ದೂರವಿಡಲಾಗಿತ್ತು. ಸ್ವಾತಂತ್ರ್ಯಾನಂತರ ಆರು ದಶಕಗಳವರೆಗೆ ಈಶಾನ್ಯ ಭಾಗದ ಹಲವು ರಾಜ್ಯ ರಾಜಧಾನಿಗಳಿಗೆ ರೈಲು ಸಂಪರ್ಕವೇ ಇರಲಿಲ್ಲ. ಈ ಪರಿಸ್ಥಿತಿಯಲ್ಲಿ ಹಂತ ಹಂತವಾಗಿ ಬದಲಾವಣೆ ತರಲಾಗಿದೆ. ಅಗಲ ಗೇಜ್ ರೈಲು ಮಾರ್ಗಗಳು ಅಗರ್ತಲಾ ಮತ್ತು ನಹರ್‌ಲಾಗುನ್‌ವರೆಗೆ ತಲುಪಿವೆ. ೨೦೨೫ರ ಸೆಪ್ಟೆಂಬರ್‌ನಲ್ಲಿ ಬೈರಾಬಿ-ಸೈರಾಂಗ್ ರೈಲು ಮಾರ್ಗ ಪೂರ್ಣಗೊಂಡು ಐಜ್ವಾಲ್‌ಗೂ ರೈಲು ಸಂಪರ್ಕ ದೊರೆತಿದ್ದು, ಮಿಜೋರಾಂನಲ್ಲಿ ಮೊದಲ ಬಾರಿಗೆ ರೈಲು ಸಂಚಾರ ಆರಂಭವಾಗಿದೆ. ಈಶಾನ್ಯ ರಾಜ್ಯಗಳು ಇದೀಗ ದೇಶದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರದೇಶಗಳಲ್ಲೊಂದಾಗಿವೆ. ಜಮ್ಮು-ಕಾಶ್ಮೀರದಲ್ಲೂ ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಮಾರ್ಗ ೨೮ ವರ್ಷಗಳ ನಿರ್ಮಾಣದ ಬಳಿಕ ೨೦೨೫ರ ಜೂನ್‌ನಲ್ಲಿ ಸಂಚಾರಕ್ಕೆ ಮುಕ್ತವಾಗಿದೆ. ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆಯಾದ ಚೆನಾಬ್ ಸೇತುವೆಯನ್ನು ಒಳಗೊಂಡಿರುವ ಈ ಮಾರ್ಗದಲ್ಲಿ ಚಳಿಗಾಲದಲ್ಲೂ ರೈಲು ಸಂಚಾರ ಮುಂದುವರಿಯುತ್ತಿದೆ. ತಲುಪಲು ಕಷ್ಟವಾಗಿದ್ದ ಪ್ರದೇಶಗಳು ಈಗ ಸುಲಭವಾಗಿ ತಲುಪಬಹುದಾದ ಸ್ಥಳಗಳಾಗಿವೆ.

<><><><>

೨೦೨೦೬ರ ಐಚಿ-ನಗೋಯಾ ಏಷ್ಯನ್ ಗೇಮ್ಸ್ ಇಂದು ಮುಕ್ತಾಯಗೊಳ್ಳಲಿದ್ದು, ಎರಡು ವಾರಗಳಿಗಿಂತ ಹೆಚ್ಚು ರೋಮಾಂಚಕಾರಿ ಕ್ರೀಡಾ ಉತ್ಸವಕ್ಕೆ ತೆರೆ ಬೀಳಲಿದೆ. ಸಮಾರೋಪ ಸಮಾರಂಭವು ಜಪಾನ್ ನ ನಗೋಯಾ ಸಿಟಿ ಮಿಜುಹೊ ಪಾರ್ಕ್ ಅಥ್ಲೆಟಿಕ್ ಕ್ರೀಡಾಂಗಣದಲ್ಲಿ ನಡೆಯಲಿದೆ. ಸಮಾರೋಪ ಸಮಾರಂಭವು ಭಾರತೀಯ ಕಾಲಮಾನ ಸಂಜೆ ೬ಗಂಟೆಗೆ ಪ್ರಾರಂಭವಾಗಲಿದೆ. ಭಾರತವು ಈ ವರ್ಷದ ಕ್ರೀಡಾಕೂಟದಲ್ಲಿ ಉತ್ತಮ ಪ್ರದರ್ಶನ ನೀಡಿದ್ದು, ೨೧ ಚಿನ್ನ, ೨೭ ಬೆಳ್ಳಿ ಮತ್ತು ೩೭ ಕಂಚು ಸೇರಿದಂತೆ ಒಟ್ಟು ೮೫ ಪದಕಗಳೊಂದಿಗೆ ಒಟ್ಟಾರೆ ಪದಕ ಪಟ್ಟಿಯಲ್ಲಿ ನಾಲ್ಕನೇ ಸ್ಥಾನವನ್ನು ಗಳಿಸಿದೆ. ಚೀನಾ, ಜಪಾನ್ ಮತ್ತು ದಕ್ಷಿಣ ಕೊರಿಯಾ ಕ್ರಮವಾಗಿ ಮೊದಲ ಮೂರು ಸ್ಥಾನ ಗಳಿಸಿವೆ. ಸಮಾರೋಪ ಸಮಾರಂಭಕ್ಕೆ ಭಾರತದ ಮಹಿಳಾ ಧ್ವಜಧಾರಿ ಶೂಟಿಂಗ್ ಸ್ಟಾರ್ ನೀರೂ ಧಂಡಾ ಎಂದು ದೃಢಪಡಿಸಲಾಗಿದೆ. ಅವರು ನಗೋಯಾದಲ್ಲಿ ಹೆಮ್ಮೆಯಿಂದ ತ್ರಿವರ್ಣ ಧ್ವಜವನ್ನು ಹಿಡಿದು ತಂಡವನ್ನು ಮುನ್ನಡೆಸಲಿದ್ದಾರೆ. ಸಮಾರಂಭವು

ಕ್ರೀಡಾಪಟುಗಳ ಮೆರವಣಿಗೆ ಮತ್ತು ಕ್ರೀಡಾಕೂಟದ ಔಪಚಾರಿಕ ಸಮಾರೋಪ ಸೇರಿದಂತೆ ಸಾಂಪ್ರದಾಯಿಕ ಸಮಾರೋಪ ಪ್ರಕ್ರಿಯೆಗಳನ್ನು ಒಳಗೊಂಡಿರುತ್ತದೆ.

<><><><>

ನ್ಯೂಚಂಡಿಗಢದಲ್ಲಿ ಕಳೆದ ರಾತ್ರಿ ನಡೆದ ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ಮೂರನೇ ಹಾಗೂ ಅಂತಿಮ ಏಕದಿನ ಪಂದ್ಯದಲ್ಲಿ ಭಾರತ ೫ ವಿಕೆಟ್ ಗಳಿಂದ ಪರಾಭವಗೊಂಡಿದೆ. ಆದಾಗ್ಯೂ ಮೂರು ಪಂದ್ಯಗಳ ಏಕದಿನ ಸರಣಿಯನ್ನು ೨-೧ ಅಂತರದಲ್ಲಿ ವಶಪಡಿಸಿಕೊಂಡಿದೆ. ಪಿಸಿಎ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಭಾರತ ೫೦ ಓವರ್ ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೩೫೧ ರನ್ ಕಲೆಹಾಕಿತು. ಇದಕ್ಕೆ ಪ್ರತಿಯಾಗಿ ವೆಸ್ಟ್ ಇಂಡೀಸ್ ೪೮.೨ ಓವರ್ ಗಳಲ್ಲಿ ೫ ವಿಕೆಟ್ ಕಳೆದುಕೊಂಡು ೩೫೨ ರನ್ ಗಳಿಸಿ, ಸರಣಿ ಸೋಲಿನ ಅಂತರವನ್ನು ೧-೨ಕ್ಕೆ ತಗ್ಗಿಸಿತು. ಅಜೇಯ ೧೬೨ ರನ್ ಗಳಿಸಿದ ಶಾಯಿ ಹೋಪ್ ವೆಸ್ಟ್ ಇಂಡೀಸ್ ತಂಡದ ಗೆಲುವಿನಲ್ಲಿ ನಿರ್ಣಾಯಕ ಪಾತ್ರವಹಿಸಿದರು. ಇದಕ್ಕೂ ಮುನ್ನ ರೋಹಿತ್ ಶರ್ಮ ೯೨ ಹಾಗೂ ಕೆ.ಎಲ್. ರಾಹುಲ್ ಅಜೇಯ ೧೨೯ ರನ್ ಗಳಿಸಿದ ಪರಿಣಾಮ ಭಾರತ ೩೫೧ ರನ್ ಗಳ ಸವಾಲಿನ ಗುರಿ ನೀಡಲು ಸಾಧ್ಯವಾಯಿತು. ಉಭಯ ತಂಡಗಳ ನಡುವಿನ ಐದು ಪಂದ್ಯಗಳ ಟಿ೨೦ ಸರಣಿ ಇದೇ ೬ರಂದು ಲಖನೌದಲ್ಲಿ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>